**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–35)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005 (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ನ್ನು, ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ, 2005 (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ರ, 3ನೇ ಪ್ರಕರಣದ, (4)ನೇ ಉಪಪ್ರಕರಣದಲ್ಲಿರುವ, (ಎ) ಖಂಡದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(ಎ) ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾರೇ ಇತರ ಮಂತ್ರಿ - ಪದನಿಮಿತ್ತ ಅಧ್ಯಕ್ಷರು ".

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

ಮುಖ್ಯಮಂತ್ರಿ ಅಥವಾ ಕಂದಾಯ ಮಂತ್ರಿ ಅಥವಾ ಮುಖ್ಯಮಂತ್ರಿಯವರು ಆಯ್ಕೆ ಮಾಡಿದ ಯಾವುದೇ ಇತರ ಮಂತ್ರಿಯವರು ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗುವ ಕುರಿತಾದ ಉಪಬಂಧವನ್ನು ಪರಿಷ್ಕರಿಸಲು, ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005 (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 13)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

## **ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ಕೃಷ್ಣ ಭೈರೇಗೌಡ**
ಕಂದಾಯ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ ಅಧಿನಿಯಮ, 2005ರ

## (2005ರ ಕರ್ನಾಟಕ ಅಧಿನಿಯಮ ಸಂಖ್ಯೆ 13) ಉದ್ಧೃತ ಭಾಗ

**XXX XXX XXX**

**3. ಮಂಡಳಿಯ ರಚನೆ.-** (1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, 'ಬಸವಕಲ್ಯಾಣ ಅಭಿವೃದ್ಧಿ ಮಂಡಳಿ' ಎಂದು ಕರೆಯಲಾಗುವ ಒಂದು ಮಂಡಳಿಯನ್ನು ಸ್ಥಾಪಿಸತಕ್ಕದ್ದು.

(2) ಮಂಡಳಿಯು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಮಂಡಳಿಯು, ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಮಂಡಳಿಯು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಗಳು, ಇವರು ಮಂಡಳಿಯ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಭಾರದಲ್ಲಿರುವ ಸಚಿವರು;

(ಸಿ) ಕಂದಾಯ ಇಲಾಖೆಯ ಪ್ರಭಾರದಲ್ಲಿರುವ ಸಚಿವರು;

(ಡಿ) ಬಸವಕಲ್ಯಾಣ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣಾ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಇ) ಅಧ್ಯಕ್ಷರು, ಬಸವಸಮಿತಿ, ಬಸವಭವನ, ಬೆಂಗಳೂರು;

(ಎಫ್) ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು;

(ಜಿ) ಶರಣ ಬಸವೇಶ್ವರರು ಅಂಗೀಕರಿಸಿ ಸಾರಿದ ತತ್ವಗಳ ಅನುಷ್ಠಾನಕ್ಕಾಗಿ ದುಡಿದಂಥ, ರಾಜ್ಯಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ಮುಖ್ಯ ಇಂಜಿನಿಯರ್, ಸಿವಿಲ್ ಹುದ್ದೆಯನ್ನು ಹೊಂದಿದ್ದ ವ್ಯಕ್ತಿಯಾಗಿರತಕ್ಕದ್ದು;

(ಎಚ್) ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ;

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025